ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ಪಶು ಸಂಗೋಪನೆ – ಹಕ್ಕಿಜ್ವರ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 7/1/2021

# ಹಕ್ಕಿಜ್ವರ ಭೀತಿ: ಪಕ್ಷಿಧಾಮಗಳಲ್ಲಿ ಪರಿಶೀಲನೆ

7/1/21

ಶ್ರೀರಂಗಪಟ್ಟಣ/ಭಾರತೀನಗರ: ಕೇರಳದಲ್ಲಿ ಹಕ್ಕಿಜ್ವರದ ಭೀತಿ ಹಿನ್ನೆಲೆಯಲ್ಲಿ ಪ್ರಸಿದ್ಧ ಪ್ರವಾಸಿ ತಾಣ ರಂಗನತಿಟ್ಟು ಪಕ್ಷಿಧಾಮ ಹಾಗೂ ಮದ್ದೂರಿನ ಕೊಕ್ಕರೆ ಬೆಳ್ಳೂರು ಗ್ರಾಮಕ್ಕೆ ಬುಧವಾರ ವೈದ್ಯರು ಹಾಗೂ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತು. ಡಿಸೆಂಬರ್ ಹಾಗೂ ಜನವರಿ ತಿಂಗಳಲ್ಲಿ ಸಂತಾನಕ್ಕಾಗಿ ಶ್ರೀರಂಗಪಟ್ಟಣ ರಂಗನತಿಟ್ಟು ಹಾಗೂ ಮದ್ದೂರು ತಾಲೂಕಿನ ಕೊಕ್ಕರೆ ಬೆಳ್ಳೂರು ಗ್ರಾಮಕ್ಕೆ ವಿವಿಧ ಜಾತಿಯ ಪಕ್ಷಿಗಳು ಆಗಮಿಸಿದ್ದು ಬೀಡು ಬಿಟ್ಟಿವೆ. ಈಗಾಗಲೇ ಕೇರಳ ರಾಜ್ಯದಲ್ಲಿ ಹಕ್ಕಿಜ್ವರದ ಭೀತಿ ಎದುರಾಗಿರುವ ಬೆನ್ನಲ್ಲೇ ಕೊಕ್ಕರೆ ಬೆಳ್ಳೂರಿನಲ್ಲಿ ಹಕ್ಕಿಗಳು ಇದ್ದಕ್ಕಿದ್ದಂತೆ ಮರದಿಂದ ಬಿದ್ದು ಸಾವನ್ನಪ್ಪುತ್ತಿವೆ. ಈ ಹಿನ್ನೆಲೆಯಲ್ಲಿ ಬುಧವಾರ ರಂಗನತಿಟ್ಟು ಪಕ್ಷಿಧಾಮ ಹಾಗೂ ಕೊಕ್ಕರೆ ಬೆಳ್ಳೂರಿಗೆ ಅರಣ್ಯಾಧಿಕಾರಿಗಳು ಹಾಗೂ ವೈದ್ಯರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹಕ್ಕಿಜ್ವರದ ಮುಂಜಾಗ್ರತೆ ಹಿನ್ನೆಲೆಯಲ್ಲಿ ಅಧಿಕಾರಿಗಳ ತಂಡ ಹಕ್ಕಿಗಳ ಪಿಕ್ಕೆಗಳನ್ನು ಸಂಗ್ರಹಿಸಿ ಪರೀಕ್ಷೆ ನಡೆಸಲು ಕೊಂಡೊಯ್ಯಲಾಯಿತು. ಇತ್ತ ಕೊಕ್ಕರೆ ಬೆಳ್ಳೂರಿನಲ್ಲಿ ಅಧಿಕಾರಿಗಳು ಸತ್ತ ಪಕ್ಷಿಗಳ ಕಳೇಬರ ಪಂಚನಾಮೆ ನಡೆಸಿ ಮಾದರಿ ಸಂಗ್ರಹಿಸಲಾಗಿದೆ.